# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 435**
**ಸದಸ್ಯರ ಹೆಸರು : ಹೇಮಲತಾ ನಾಯಕ್**
**(ವಿಧಾನಸಭೆಯಿಂದ ಚುನಾಯಿತರಾದವರು)**
**ಉತ್ತರಿಸುವ ದಿನಾಂಕ : 15.02.2024**
**ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಂಗಭದ್ರಾ ಎಡದಂಡೆ ನಾಲೆಯ ನೀರು ಕೊನೆ ಭಾಗದ ರೈತರಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನಾಲೆಯ ನೀರನ್ನು ಕೊನೆಯ ಭಾಗದ ರೈತರಿಗೆ ತಲುಪಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಬಂದಿದೆ.<br>ಮುಖ್ಯ ಇಂಜಿನಿಯರ್, ಅಧೀಕ್ಷಕ ಇಂಜಿನಿಯರ್, ಕಾರ್ಯಪಾಲಕ ಇಂಜಿನಿಯರ್ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕಛೇರಿಯ ಅಧಿಕಾರಿ/ಸಿಬ್ಬಂದಿಗಳನ್ನೊಳಗೊಂಡ ತಂಡಗಳನ್ನು ರಚಿಸಿ, ಹಗಲು ರಾತ್ರಿ ಪಹರೆಯೊಂದಿಗೆ ಕೊನೆಯ ಭಾಗದ ರೈತರ ಜಮೀನುಗಳಿಗೆ ನೀರು ಹರಿಸಲು ಹಾಗೂ ಕೊನೆಯ ಭಾಗದ ಅಚ್ಚುಕಟ್ಟಿಗೆ ನೀರನ್ನೊದಗಿಸಲು ಅನುವಾಗುವಂತೆ ವಿತರಣಾ ಕಾಲುವೆಗಳಲ್ಲಿ ಆನ್/ಆಫ್ ಪದ್ಧತಿಯನ್ನು ಅನುಸರಿಸಿ ನೀರು ನಿರ್ವಹಣೆಯನ್ನು ಮಾಡಲಾಗುತ್ತಿದೆ. |
| ಆ) | ತುಂಗಭದ್ರಾ ಎಡದಂಡೆ ನಾಲೆಯ ಅಚ್ಚುಕಟ್ಟು ಪ್ರದೇಶದಲ್ಲಿ ಅಕ್ರಮವಾಗಿ ನೀರನ್ನು ಬಳಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅಕ್ರಮವನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮವೇನು; | ಬಂದಿದೆ.<br>ಸದರಿ ಕಾಲುವೆ ವ್ಯಾಪ್ತಿಗೆ ಸಂಬಂಧಿಸಿದ ಕಂದಾಯ ಇಲಾಖೆ, ಪೋಲೀಸ್ ಇಲಾಖೆ ಮತ್ತು ಜೆಸ್ಕಾಂ ಇಲಾಖೆಯ ಸಹಯೋಗದೊಂದಿಗೆ ಅಗತ್ಯ ಸಹಕಾರ ಪಡೆದುಕೊಂಡು ಅನಧಿಕೃತವಾಗಿ ಬಳಸುತ್ತಿರುವ ಸಂಪರ್ಕಗಳನ್ನು ಕೂಡಲೇ ಕಡಿತಗೊಳಿಸಿ ಕಾಲುವೆಯಲ್ಲಿ ನಿಗದಿಪಡಿಸಿದ ಗೇಜನ್ನು ನಿಯಂತ್ರಿಸಿ ಕೆಳಭಾಗದ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಅಕ್ರಮವಾಗಿ ನೀರನ್ನು ಬಳಸಿಕೊಳ್ಳುತ್ತಿರುವುದರಿಂದ ಸ್ಥಳೀಯ ನೀರಾವರಿ ಇಲಾಖಾ ಅಧಿಕಾರಿಗಳು ಬೆಂಬಲ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಸದರಿ ಅಧಿಕಾರಿಗಳ ವಿರುದ್ಧ ತಗೆದುಕೊಂಡ ಕ್ರಮವೇನು; | ಇಂತಹ ಪ್ರಕರಣಗಳು ಯಾವುದು ಇರುವುದಿಲ್ಲ. |
| ಈ) | ತುಂಗಭದ್ರಾ ಎಡದಂಡೆ ನಾಲೆಯ ಕೊನೆಯ ಭಾಗದ ರೈತರಿಗೆ ನೀರು ಒದಗಿಸಲು ಶಾಶ್ವತ ಕ್ರಮವೇನು; ನಾರಾಯಣಪುರ ಎಡದಂಡೆ ನಾಲೆ SCADA Gate ಅಳವಡಿಸಿದಂತೆ ತುಂಗಭದ್ರಾ ಎಡದಂಡೆ ನಾಲೆಗೂ SCADA Gate ಅಳವಡಿಸಲು ಸಾಧ್ಯವಿಲ್ಲವೇ; ಸಾಧ್ಯವಿದ್ದಲ್ಲಿ ಯಾವ ಕಾಲಮಿತಿಯೊಳಗೆ ಅಳವಡಿಸಲಾಗುವುದು. | ತುಂಗಭದ್ರಾ ಎಡದಂಡೆ ಕಾಲುವೆಗಳಿಗೆ ಸ್ಕಾಡಾ ಗೇಟುಗಳನ್ನು ಅಳವಡಿಸುವ ಯೋಜನೆಯ ಪ್ರಾಥಮಿಕ ಯೋಜನಾ ವರದಿಯನ್ನು ತಯಾರಿಸಲಾಗಿದ್ದು, ಪ್ರಸ್ತಾವನೆಯನ್ನು ಸದ್ಯಕ್ಕೆ ಮುಂದೂಡಲಾಗಿದೆ. |

**ಜಸಂಇ 13 ಎಂಎಲ್‌ಎ 2024**

**(ಡಿ.ಕೆ.ಶಿವಕುಮಾರ್)**
ಉಪ ಮುಖ್ಯಮಂತ್ರಿ